APC-B

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2018-19ನೇ ಸಾಲಿನ ಕಾರ್ಯಕ್ರಮ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ

1. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2018 ದಿನಾಂಕ: 04.08.2018.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2018 ದಿನಾಂಕ: 07.08.2018.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2018, ದಿನಾಂಕ: 30.10.2018.
4. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2018, ದಿನಾಂಕ: 27.12.2018.
5. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2018, ದಿನಾಂಕ: 25.01.2019.
6. ಸರ್ಕಾರದ ಆದೇಶ ಸಂಖ್ಯೆ: ಕೃಇ 61 ಕೃಉಇ 2018, ದಿನಾಂಕ: 13.02.2019.
7. ಕೇಂದ್ರ ಸರ್ಕಾರದ ಪತ್ರಸಂಖ್ಯೆ: 1-12/2018-RKVY/1/2/3, ದಿನಾಂಕ: 20.03.2019.
8. ಕೃಷಿ ಆಯುಕ್ತರ ಪತ್ರ ಸಂ: RKVY/GOK/2018-19, ದಿನಾಂಕ: 20.03.2019.
9. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 1 BGL 2018, ದಿನಾಂಕ: 26.03.2019.

<u>ಪ್ರಸ್ತಾವನೆ:</u>

2018-19ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಲೆಕ್ಕ ಶೀರ್ಷಿಕೆ: 2401-00-800-1-57 ರಡಿ ಒಟ್ಟು ರೂ. 28400.00 ಲಕ್ಷ ಅನುದಾನ ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2017-18ನೇ ಸಾಲಿನ ಉಳಿಕೆ ಅನುದಾನ ರೂ. 38.04 ಕೋಟಿಗಳನ್ನು ಪ್ರಸ್ತುತ ಸಾಲಿನಲ್ಲಿ ಬಳಸಲು ಕೇಂದ್ರ ಸರ್ಕಾರದಿಂದ ಅನುಮತಿ ದೊರಕಿದ್ದ ಹಿನ್ನೆಲೆಯಲ್ಲಿ ಸದರಿ ಅನುದಾನದ ಪೈಕಿ ಲಭ್ಯವಿದ್ದ ಅನುದಾನ ರೂ 33.57 ಕೋಟಿಗಳನ್ನು ಮರುಮೌಲ್ಯೀಕರಣಗೊಳಿಸಿ ಬಿಡುಗಡೆ ಮಾಡಲಾಗಿರುತ್ತದೆ ಹಾಗೂ 2018-19ನೇ ಸಾಲಿಗೆ ವಿವಿಧ ಇಲಾಖೆಗಳಿಗೆ ಒಟ್ಟು **ರೂ. 173.72 ಕೋಟಿ** ಅನುದಾನದ ಮಿತಿಗೊಳಪಟ್ಟು ಕಾರ್ಯಕ್ರಮ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

--

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ 2018-19ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ: 2401-00-800-1-57 ಅಡಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಅನುಷ್ಠಾನಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊದಲನೇ ಕಂತಿನ ಅನುದಾನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನ ಸೇರಿಸಿ ಒಟ್ಟು ರೂ.86.85 ಕೋಟಿಗಳನ್ನು ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡುತ್ತಾ ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನವನ್ನು ಶೇ. 60:40ರ ಅನುಪಾತದಲ್ಲಿ ನಿಗದಿಪಡಿಸಿಕೊಂಡು ಘಟಕವಾರು ಹಾಗೂ ವರ್ಗವಾರು ನಿಗಧಿತ ಪ್ರಮಾಣದಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಮಂಜೂರಾತಿ ನೀಡಿರುತ್ತದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (RKVY) ಯಡಿಯ Additional Fodder Development Programme and Crop Diversification Programme ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನ ಸೇರಿಸಿ ಒಟ್ಟಾರೆ ರೂ. 3.41 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೇಂದ್ರದಿಂದ ಬಿಡುಗಡೆಯಾಗಿದ್ದ ಎರಡನೇ ಕಂತಿನ ಅನುದಾನದ ಪೈಕಿ ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನ ಸೇರಿಸಿ ಒಟ್ಟು ರೂ. 73.64 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (5)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ ಆರ್‌ಪಿಎಸ್ & ಎಎಚ್ (Reclamation of Problem Soil & Animal Health) ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊದಲನೇ ಕಂತಿನ ಅನುದಾನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನ ಸೇರಿಸಿ ಒಟ್ಟು ರೂ.3.20 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (6)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ ಪ್ರಧಾನ ಲೆಕ್ಕ ಶೀರ್ಷಿಕೆ: 2401-00-800-1-57ರಡಿಯ ಉಪ ಶೀರ್ಷಿಕೆ: 059 ಇಂದ ರೂ. 31.97 ಕೋಟಿ ಅನುದಾನವನ್ನು ಇದೇ ಲೆಕ್ಕ ಶೀರ್ಷಿಕೆಯ ಉಪ ಶೀರ್ಷಿಕೆ: 106ರಡಿ ಹೆಚ್ಚುವರಿಯಾಗಿ ಒದಗಿಸಿಕೊಂಡು ಆ ಪೈಕಿ ರೂ. 18.72 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (7)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೂ. 19.00 ಕೋಟಿ ಅನುದಾನವನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡುತ್ತಾ, ರಾಜ್ಯದ ಪಾಲಿನ ಶೇ 40ರಷ್ಟು ಅನುದಾನವನ್ನು ಒದಗಿಸಿಕೊಂಡು ಕಾರ್ಯಕ್ರಮ ಅನುಷ್ಠಾನಕ್ಕೆ ವೆಚ್ಚ ಭರಿಸವಂತೆ ತಿಳಿಸಲಾಗಿದೆ.

ಮೇಲೆ ಓದಲಾದ (8)ರ ಕೃಷಿ ಆಯುಕ್ತರ ಪತ್ರದಲ್ಲಿ ಕೇಂದ್ರ ಸರ್ಕಾರವು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಹೆಚ್ಚುವರಿಯಾಗಿ ಬಿಡುಗಡೆ ಮಾಡಿರುವ ರೂ. 19.00 ಕೋಟಿ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ರೂ. 12.66 ಕೋಟಿಗಳ ಅನುದಾನ ಸೇರಿಸಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

(ರೂ. ಕೋಟಿಗಳಲ್ಲಿ)

| Sl. No | Name of the Department | General (059) | Subsidy (106) | SCSP (422) | TSP (423) | Total |
|---|---|---|---|---|---|---|
| 1 | Horticulture | 2.17 | 3.00 | 0.40 | 0.25 | 5.82 |
| 2 | Animal Husbandry | 12.56 | 0.00 | 3.85 | 1.71 | 18.12 |
| 3 | Fisheries | 1.27 | 0.00 | 0.00 | 0.00 | 1.27 |
| 4 | UAS, Raichur | 0.61 | 0.00 | 0.00 | 0.00 | 0.61 |
| 5 | UAHS, Shivamogga | 0.71 | 0.00 | 0.00 | 0.00 | 0.71 |
| 6 | UHS, Bagalakote | 1.35 | 0.00 | 0.40 | 0.25 | 2.00 |
| 7 | KSSOCA | 1.40 | 0.00 | 0.50 | 0.30 | 2.20 |
| 8 | DCR, Puttur | 0.93 | 0.00 | 0.00 | 0.00 | 0.93 |
| | **Total** | **21.00** | **3.00** | **5.15** | **2.51** | **31.66** |

ಮೇಲೆ ಓದಲಾದ (9)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ಕೇಂದ್ರ ಸರ್ಕಾರವು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಗೆ ಹೆಚ್ಚುವರಿಯಾಗಿ ಬಿಡುಗಡೆ ಮಾಡಿರುವ ರೂ. 19.00 ಕೋಟಿ ಅನುದಾನವು ಜಮೆಯಾಗಿರುವ ಬಗ್ಗೆ ಜಮಾ ದೃಢೀಕರಣ ಪತ್ರವನ್ನು ನೀಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## <u>ಸರ್ಕಾರದ ಆದೇಶ ಸಂಖ್ಯೆ; ಕೃಇ 61 ಕೃಉಇ 2018, ಬೆಂಗಳೂರು, ದಿನಾಂಕ: 29.03.2019</u>

2018–19ನೇ ಸಾಲಿನ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರವು ಹೆಚ್ಚುವರಿಯಾಗಿ ಬಿಡುಗಡೆ ಮಾಡಿರುವ ರೂ. 19.00 ಕೋಟಿ ಅನುದಾನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಶೇ.40ರಷ್ಟು ಅನುದಾನ ರೂ. 12.66 ಕೋಟಿಗಳನ್ನು ಸೇರಿಸಿ **ಒಟ್ಟು ರೂ. 31.66 ಕೋಟಿ (ಮುವತ್ತೊಂದು ಕೋಟಿ ಅರವತ್ತಾರು ಲಕ್ಷ ರೂಪಾಯಿಗಳು ಮಾತ್ರ)** ಅನುದಾನವನ್ನು ಆಯವ್ಯಯ ಲೆಕ್ಕಶೀರ್ಷಿಕೆ: 2401–00–800–1–57 ಅಡಿ ಈ ಕೆಳಕಂಡ ಇಲಾಖೆಗಳಿಗೆ ಉಪ ಶೀರ್ಷಿಕೆವಾರು ಅನುದಾನ ಬಿಡುಗಡೆ ಮಾಡುತ್ತಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

(ರೂ. ಕೋಟಿಗಳಲ್ಲಿ)

| Sl. No | Name of the Department | General (059) | Subsidy (106) | SCSP (422) | TSP (423) | Total |
|---|---|---|---|---|---|---|
| 1 | Horticulture | 2.17 | 3.00 | 0.40 | 0.25 | 5.82 |
| 2 | Animal Husbandry | 12.56 | 0.00 | 3.85 | 1.71 | 18.12 |
| 3 | Fisheries | 1.27 | 0.00 | 0.00 | 0.00 | 1.27 |
| 4 | UAS, Raichur | 0.61 | 0.00 | 0.00 | 0.00 | 0.61 |
| 5 | UAHS, Shivamogga | 0.71 | 0.00 | 0.00 | 0.00 | 0.71 |
| 6 | UHS, Bagalakote | 1.35 | 0.00 | 0.40 | 0.25 | 2.00 |
| 7 | KSSOCA | 1.40 | 0.00 | 0.50 | 0.30 | 2.20 |
| 8 | DCR, Puttur | 0.93 | 0.00 | 0.00 | 0.00 | 0.93 |
| | **Total** | **21.00** | **3.00** | **5.15** | **2.51** | **31.66** |

"THE GRANTS FOR THE DEPARTMENTS WILL BE RELEASED UNDER THE HEAD OF ACCOUNT NO.2401-00-800-1-57 (PLAN) TO THE CCO OF THE CONCERNED DEPARTMENTS / INSTITUTIONS/UNIVERSITIES. FURTHER, THE BILLS SUBMITTED BY DRAWING OFFICERS OF THE DEPARMENTS/INSTITUTIONS/UNIVERSITIES SHALL BE COUNTERSIGNED BY THE CHIEF ACCOUNTS OFFICER & FINANCIAL ADVISOR ON BEHALF OF THE DIRECTOR OF AGRICULTURE, BENGALURU.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿಎಫ್‌ಪಿ 2018, ದಿನಾಂಕ: 03.04.2018 ರಲ್ಲಿ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagaratnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)
29/03/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
8. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
9. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
10. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
11. ಆಯುಕ್ತರು, ರೇಷ್ಮೆ ಇಲಾಖೆ ಬೆಂಗಳುರು.
12. ಆಯುಕ್ತರು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು
13. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು
14. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯ, ಶಿವಮೊಗ್ಗ.
15. ಕುಪತಿಗಳು, ತೊಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ.
16. ನಿರ್ದೇಶಕರು, ಕರ್ನಾಟಕ ರಾಜ್ಯ ಸಾವಯವ ಮತ್ತು ಬೀಜ ಪ್ರಮಾಣನ ಸಂಸ್ಥೆ, ಬೆಂಗಳೂರು.
17. ನಿರ್ದೇಶಕರು, ಗೇರು ಬೀಜ ಸಂಶೋಧನಾ ನಿರ್ದೇಶನಾಲಯ, ಪುತ್ತೂರು.
18. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
19. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
20. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
21. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
22. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
23. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
24. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.